# ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ

## ಕ್ರಿಮಿನಲ್ ಪ್ರಕರಣ ಸಂಖ್ಯೆ ಃ 3405 / 2022

ಪಿರ್ಯಾದುದಾರರು ಃ ಕುದೂರು ಪೋಲಿಸ್ ಠಾಣೆ

**ವಿರುದ್ಧ**

**ಆರೋಪಿ ಃ ಪ್ರಕಾಶ ಬಿನ್ ರೇವಣ್ಣಸಿದ್ದಯ್ಯ**
**41 ವರ್ಷಗಳು, ತಿಪ್ಪಸಂದ್ರ ಗ್ರಾಮ**
**ತಿಪ್ಪಸಂದ್ರ ಹೋಬಳಿ, ಮಾಗಡಿ ತಾಲ್ಲೂಕು.**

**<u>ದೋಷರೋಪಣೆ</u>**

( ಶ್ರೀಮತಿ. ಧನಲಕ್ಷ್ಮಿ ಎಂ, ಅಪರ ನ್ಯಾಯಿಕ ದಂಡಾಧಿಕಾರಿಯಾದ ನಾನು ನಿಮ್ಮ ಮೇಲೆ ಈ ಕೆಳಕಂಡಂತೆ ದೋಷರೋಪಣೆ ಮಾಡುತ್ತಿದ್ದೇನೆ )

ದಿನಾಂಕಃ 22-01-2022 ರಂದು ರಾತ್ರಿ 7.30 ಗಂಟೆಯ ಸಮಯದಲ್ಲಿ ಚಾಸಾ-1ಃನಾಗರಾಜು ರವರ ಚಿಲ್ಲರೆ ಅಂಗಡಿಯು ತಿಪ್ಪಸಂದ್ರ ಬಸ್ ನಿಲ್ದಾಣದಲ್ಲಿದ್ದು, ಅಂಗಡಿಯ ಮುಂದೆ ಬಂದ ಆರೋಪಿಯಾದ ನೀವು ಈ ಹಿಂದೆ ಚಾಸಾ-1 ರವರ ಕಡೆಯಿಂದ ಖರೀದಿ ಮಾಡಿದ್ದ ಡಿಸ್ಕವರಿ ಬೈಕಿನ ದಾಖಲಾತಿಗಳನ್ನು ಕೊಡುವಂತೆ ಚಾಸಾ-1 ರವರಿಗೆ ಬಾಯಿಗೆ ಬಂದಂತೆ ಅವಾಚ್ಯ ಶಬ್ದಗಳಿಂದ ಸಾರ್ವಜನಿಕವಾಗಿ ಬೈದು ಅವಮಾನ ಪಡಿಸಿದ್ದು, ಸದರಿ ಕೃತ್ಯವು ಭಾರತೀಯ ದಂಡ ಸಂಹಿಂತೆ ಕಲಂ-504 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು, ನನ್ನ ಸಂಜ್ಞೆಗೆ ಒಳಪಡುತ್ತದೆ.

ಎರಡನೇಯದಾಗಿ ಈ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಅದೇ ಸಮಯದಲ್ಲಿ ಅಂಗಡಿಯಲ್ಲಿದ್ದ ಅಪಾಯಕಾರಿ ಆಯುಧವಾದ ಗಾಜಿನ ಬಾಟೇಲ್ ಗಳನ್ನು ತೆಗೆದುಕೊಂಡು ಚಾಸಾ-1 ರವರ ಹಣೆ, ಬಲಕೈ ಮತ್ತು ಎಡ ಕೈಗೆ ಹೊಡೆದು ಸಾಮಾನ್ಯ ಸ್ವರೂಪದ ನೋವುಂಟು ಮಾಡಿದ್ದು, ಸದರಿ ಕೃತ್ಯವು ಭಾರತೀಯ ದಂಡ ಸಂಹಿಂತೆ ಕಲಂ-324 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು, ನನ್ನ ಸಂಜ್ಞೆಗೆ ಒಳಪಡುತ್ತದೆ.

ಕೊನೆಯದಾಗಿ ಈ ಮೇಲೆ ಹೇಳಿದ ದಿನಾಂಕ, ಸ್ಥಳ ಹಾಗೂ ಅದೇ ಸಮಯದಲ್ಲಿ ಆರೋಪಿಯಾದ ನೀವು ಚಾಸಾ-1 ರವರಿಗೆ ಕೊಲೆ ಮಾಡುವುದಾಗಿ ಪ್ರಾಣ ಬೆದರಿಕೆ ಹಾಕಿದ್ದು, ಸದರಿ ಕೃತ್ಯವು ಭಾರತೀಯ ದಂಡ ಸಂಹಿಂತೆ ಕಲಂ-506 ರ ರೀತ್ಯಾ ಶಿಕ್ಷಾರ್ಹ ಅಪರಾಧವಾಗಿದ್ದು, ನನ್ನ ಸಂಜ್ಞೆಗೆ ಒಳಪಡುತ್ತದೆ.

ಪ್ರಶ್ನೆ-1 ಃ ನಿಮ್ಮ ಮೇಲಿನ ಆಪಾದನೆಯ ಸಾರವನ್ನು ಓದಿ, ವಿವರಿಸಿ ಹೇಳಿದಾಗ ನಿಮಗೆ ಅರ್ಥವಾಯಿತೆ?

**ಆರೋಪಿ ಉತ್ತರ ಃ**

ಪ್ರಶ್ನೆ-2 ಃ ನೀವು ನಿಮ್ಮ ತಪ್ಪನ್ನು ಒಪ್ಪುಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಇಚ್ಚೆಸುವಿರೋ ?

**ಆರೋಪಿ ಉತ್ತರ ಃ**

( ಈ ಮೇಲ್ಕಂಡ ದೋಷರೋಪಣೆಯನ್ನು ನೀವುಗಳು ಈ ನ್ಯಾಯಾಲಯದ ಸಂಜ್ಞೆದೊಳಗೆ ಎಸಗಿರುವುದಾಗಿ ಈ ಮೂಲಕ ನ್ಯಾಯಾಲಯದ ವಿಚಾರಣೆಗೆ ಒಳಪಟ್ಟಿರುವುದಾಗಿ ಈ ಮೂಲ ನಿರ್ದೇಶಿಸಿರುತ್ತೇನೆ )

( ಈ ಮೇಲ್ಕಂಡ ಆರೋಪಿತರುಗಳ ಹೇಳಿಕೆಯನ್ನು ಅವರಿಗೆ ತಿಳಿಯುವ ಭಾಷೆಯಲ್ಲಿ ಓದಿ, ಹೇಳಿ, ಕೇಳಿ, ಸರಿ ಇದೆ ಎಂದು ನನ್ನ ಸಮಕ್ಷಮ ದಿನಾಂಕಃ 27-04-2023 ರಂದು ಸಹಿ ಮಾಡಿರುತ್ತಾರೆ )

( ಧನಲಕ್ಷ್ಮೀ ಎಂ )
ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು
ಜೆಎಂಎಫ್‌ಸಿ ನ್ಯಾಯಾಲಯ, ಮಾಗಡಿ.